498 (532) ಶ್ರೀ ಮಲ್ಲಿಕಾರ್ಜುನ ಎಂ. ಖರ್ಗೆ (ಗುರುಮಿಠ್‌ಕಲ್) :– ಮಾನ್ಯ ಜಲ ಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಗೋದಾವರಿ ನೀರಿನ ಹಂಚಿಕೆ ಪ್ರಕಾರ ಮಾಂಜ್ರಾ ನದಿಗೆ ಅಡ್ಡಲಾಗಿ ಕೃಷ್ಣಾ ಭಾಗ್ಯ ಜಲ ನಿಗಮದ ವತಿಯಿಂದ ನಿರ್ಮಿಸಬೇಕೆಂದಿರುವ ಬ್ರಿಡ್ಜ್ ಕಮ್ ಬ್ಯಾರೇಜ್‌ಗಳ ಸಂಖ್ಯೆ ಎಷ್ಟು;

ಆ) ಅವುಗಳು ಮಂಜೂರಾಗಿವೆಯೇ;

ಇ) ಹಾಗಿದ್ದಲ್ಲಿ, ಅವುಗಳ ಕೆಲಸ ಯಾವ ಹಂತದಲ್ಲಿವೆ;

ಈ) ಕೆಲಸ ಪ್ರಾರಂಭವಾಗದಿದ್ದಲ್ಲಿ, ಅದಕ್ಕೆ ಕಾರಣಗಳೇನು;

ಉ) ಈ ಬ್ರಿಡ್ಜ್ ಕಮ್ ಬ್ಯಾರೇಜ್‌ಗಳ ನಿರ್ಮಾಣಕ್ಕೆ ನಿಗದಿಪಡಿಸಿರುವ ಅಂದಾಜು ಮೊತ್ತವೆಷ್ಟು;

ಊ) ಇದುವರೆವಿಗೂ ವೆಚ್ಚ ಮಾಡಿರುವ ಮೊತ್ತವೆಷ್ಟು?

ಶ್ರೀ ಕೆ.ಎಸ್. ಈಶ್ವರಪ್ಪ (ಜಲ ಸಂಪನ್ಮೂಲ ಸಚಿವರು):

ಅ) ನಾಲ್ಕು ಬ್ಯಾರೇಜುಗಳು.

ಆ) ಆಗಿದೆ.

ಇ) ನಾಲ್ಕು ಬ್ಯಾರೇಜ್‌ಗಳ ಸಿವಿಲ್ ಕಾಮಗಾರಿಗಳನ್ನು ಗುತ್ತಿಗೆದಾರರಿಗೆ ವಹಿಸಿಕೊಡಲಾಗಿದ್ದು, ಜೂನ್ 2006ರಲ್ಲಿ ಗುತ್ತಿಗೆದಾರರೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಕಾಮಗಾರಿಗಳು ಪ್ರಾರಂಭವಾಗುವ ಹಂತದಲ್ಲಿವೆ.

ಈ) ಉದ್ಭವಿಸುವುದಿಲ್ಲ.

ಉ) ಒಟ್ಟು ಅಂದಾಜು ಮೊತ್ತ ರೂ. 200 ಕೋಟಿ.

ಊ) ಕಾಮಗಾರಿಗಳು ಪ್ರಾರಂಭವಾಗುವ ಹಂತದಲ್ಲಿರುವುದರಿಂದ ಯಾವುದೆ ವೆಚ್ಚ ಭರಿಸಲಾಗಿರುವುದಿಲ್ಲ.

499 (534) ಶ್ರೀ ಮಲ್ಲಿಕಾರ್ಜುನ ಎಂ. ಖರ್ಗೆ (ಗುರುಮಿಠ್‌ಕಲ್) :– ಮಾನ್ಯ ಜಲ ಸಂಪನ್ಮೂಲ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಗುಲ್ಬರ್ಗಾ ಜಿಲ್ಲೆ ಆಫಜಲಪೂರದ ಬಳಿ ನಿರ್ಮಿಸುತ್ತಿರುವ ಸೊನ್ನೆ ಬ್ಯಾರೇಜಿನ ಕೆಲಸ ಈಗ ಯಾವ ಹಂತದಲ್ಲಿದೆ;

ಆ) ಇದಕ್ಕೆ ನಿಗದಿಪಡಿಸಿರುವ ಅಂದಾಜು ಮೊತ್ತವೆಷ್ಟು? ಹಾಗೂ ಇದುವರೆವಿಗೂ ಮಾಡಿರುವ ವೆಚ್ಚ ಎಷ್ಟು;

ಇ) ನಿಗದಿಪಡಿಸಿರುವ ಅವಧಿಯಲ್ಲಿ ಈ ಕೆಲಸ ಪೂರ್ಣಗೊಳ್ಳುತ್ತದೆಯೇ;

ಈ) ಪೂರ್ಣಗೊಳಿಸಲು ಹಾಕಿಕೊಂಡಿರುವ ಕಾರ್ಯಕ್ರಮಗಳು ಯಾವುವು?